# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 242
ಸದಸ್ಯರ ಹೆಸರು : ಶ್ರೀ ಯು.ಬಿ.ವೆಂಕಟೇಶ್
(ನಾಮ ನಿರ್ದೇಶನ ಹೊಂದಿದವರು)
ಉತ್ತರಿಸುವ ದಿನಾಂಕ : 14.09.2022.
ಉತ್ತರಿಸುವ ಸಚಿವರು : ಕಂದಾಯ ಸಚಿವರು

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಬೆಂಗಳೂರು ನಗರ ಜಿಲ್ಲೆ, ಬೆಂಗಳೂರು ದಕ್ಷಿಣ ತಾಲ್ಲೂಕು, ಕೆಂಗೇರಿ ಹೋಬಳಿ, ಚಿಕ್ಕಲಸಂದ್ರ ಗ್ರಾಮದ ಸ.ನಂ.76ರಲ್ಲಿರುವ ಕೆರೆಯ ವಿಸ್ತೀರ್ಣ ಎಷ್ಟು; ಇದರಲ್ಲಿ ಸರ್ಕಾರದ ವಿವಿಧ ಯೋಜನೆಗಳಿಗೆ ಬಳಕೆ ಮಾಡಿಕೊಳ್ಳಲಾದ ಭೂಮಿಯ ವಿಸ್ತೀರ್ಣ ಎಷ್ಟು; ಸರ್ಕಾರದ ವಶದಲ್ಲಿರುವ ಭೂಮಿಯ ಒಟ್ಟು ವಿಸ್ತೀರ್ಣ ಎಷ್ಟು; | ಬೆಂಗಳೂರು ನಗರ ಜಿಲ್ಲೆ, ಬೆಂಗಳೂರು ದಕ್ಷಿಣ ತಾಲ್ಲೂಕು ಉತ್ತರಹಳ್ಳಿ ಹೋಬಳಿ, ಚಿಕ್ಕಲ್ಲಸಂದ್ರ ಗ್ರಾಮದ ಸ.ನಂ.76 ರಲ್ಲಿರುವ ಕೆರೆಯ ವಿಸ್ತೀರ್ಣ 12-26 ಎಕರೆ/ಗುಂಟೆ ಇದ್ದು, ಇದರಲ್ಲಿ ಸರ್ಕಾರದ ವಿವಿಧ ಯೋಜನೆಗಳಿಗೆ ಯಾವುದೇ ಜಮೀನನ್ನು ಮಂಜೂರು ಮಾಡಿರುವುದಿಲ್ಲ. ಸದರಿ ಜಮೀನಿನಲ್ಲಿ 0.06 ಗುಂಟೆ ಬಿ.ಎಂ.ಟಿ.ಸಿ. ಬಸ್ ನಿಲ್ದಾಣ, 1 ಎಕರೆ 34 ಗುಂಟೆ ಹಳ್ಳ ಮತ್ತು ರಸ್ತೆಗಳು ಸರ್ಕಾರಿ ಒತ್ತುವರಿಯಾಗಿದ್ದು, 5 ಎಕರೆ 06 ಗುಂಟೆ ಜಮೀನು ಸರ್ಕಾರದ ವಶದಲ್ಲಿದ್ದು, ಹಾಲಿ ತಂತಿ ಬೇಲಿ ನಿರ್ಮಿಸಲಾಗಿರುತ್ತದೆ. |
| ಆ) | ಈ ಕೆರೆ ಪ್ರದೇಶ ಭೂ ಒತ್ತುವರಿಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ; ಎಷ್ಟು ಎಕರೆ ಭೂಮಿಯೂ ಒತ್ತುವರಿಯಾಗಿದೆ; ಒತ್ತುವರಿಯನ್ನು ತೆರವುಗೊಳಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು; | ಈ ಕೆರೆ ಪ್ರದೇಶದ 04 ಎಕರೆ 27 ಗುಂಟೆ ಖಾಸಗಿ ಕಟ್ಟಡಗಳು ಹಾಗೂ ಮನೆಗಳು ಮತ್ತು 0-33 ಗುಂಟೆ ನರ್ಸರಿ ಪ್ರದೇಶವಾಗಿದ್ದು, ಒಟ್ಟು 5-20 ಎ/ಗು ಖಾಸಗಿ ಒತ್ತುವರಿಯಾಗಿರುತ್ತದೆ. ಸದರಿ ಒತ್ತುವರಿಯನ್ನು ತೆರವುಗೊಳಿಸಲು ತಹಸೀಲ್ದಾರ್, ಬೆಂಗಳೂರು ದಕ್ಷಿಣ ಇವರು ಕರ್ನಾಟಕ ಭೂಕಂದಾಯ ಕಾಯ್ದೆ 1964ರ ಕಲಂ 104 ರಡಿ ನೋಟಿಸ್ ಜಾರಿ ಮಾಡಿರುತ್ತಾರೆ. |
| ಇ) | ಒತ್ತುವರಿದಾರರ ವಿರುದ್ಧ ದಾಖಲಾಗಿರುವ ಪ್ರಕರಣಗಳ ಸಂಖ್ಯೆ ಎಷ್ಟು; ಇಲ್ಲದಿದ್ದಲ್ಲಿ; ಕಾರಣಗಳೇನು? (ಸಂಪೂರ್ಣ ವಿವರವನ್ನು ಒದಗಿಸುವುದು) | ಒತ್ತುವರಿದಾರರ ವಿರುದ್ಧ ಯಾವುದೇ ಪ್ರಕರಣಗಳು ದಾಖಲಾಗಿರುವುದಿಲ್ಲ. ಒತ್ತುವರಿದಾರರಿಗೆ ತಹಸೀಲ್ದಾರ್, ಬೆಂಗಳೂರು ದಕ್ಷಿಣ ಇವರು ಕರ್ನಾಟಕ ಭೂಕಂದಾಯ ಕಾಯ್ದೆ 1964ರ ಕಲಂ 104 ರಡಿ ನೋಟಿಸ್ ಜಾರಿ ಮಾಡಿರುತ್ತಾರೆ. |

ಸಂಖ್ಯೆ: ಆರ್‌ಡಿ 175 ಎಲ್‌ಜಿಕ್ಯೂ 2022

(ಆರ್.ಅಶೋಕ)
ಕಂದಾಯ ಸಚಿವರು